ಅರ್ಕಾವತಿ ನದಿಯನ್ನು ಸ್ವಚ್ಛಗೊಳಿಸುವುದು

138 (113) ಶ್ರೀ ರಾಜು .ಕೆ (ರಾಮನಗರ): ಮಾನ್ಯ ನಗರಾಭಿವೃದ್ಧಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ, ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳು ಹಾಗೂ ಬೆಂಗಳೂರು ಜಲ ಮಂಡಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಅರ್ಕಾವತಿ ನದಿಯು ಇತ್ತೀಚಿನ ದಿನಗಳಲ್ಲಿ ಪೂರ್ಣ ಪ್ರಮಾಣದಲ್ಲಿ ಕಲುಷಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಇದನ್ನು ಸ್ವಚ್ಛಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಇ) ಈ ನದಿಯನ್ನು ಸ್ವಚ್ಛಗೊಳಿಸುವುದರಿಂದ ರಾಮನಗರ ತಾಲ್ಲೂಕಿನಲ್ಲಿ ಅಂತರ್ಜಲವನ್ನು ಕಾಯ್ದುಕೊಳ್ಳಲು ಅನುಕೂಲವಾಗುವುದಿಲ್ಲವೇ;

ಈ) ಹಾಗಿದ್ದಲ್ಲಿ, ಈ ನದಿಯನ್ನು ಸ್ವಚ್ಛಗೊಳಿಸಲು ಸರ್ಕಾರಕ್ಕಿರುವ ತೊಂದರೆಗಳೇನು;

ಉ) ಈ ನದಿಯನ್ನು ಸ್ವಚ್ಛಗೊಳಿಸಲು ಸರ್ಕಾರದ ಅನುದಾನವನ್ನೇನಾದರೂ ನಿಗದಿಪಡಿಸಿದೆಯೇ?

ಶ್ರೀ ಎಸ್. ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ, ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳು ಹಾಗೂ ಬೆಂಗಳೂರು ಜಲ ಮಂಡಳಿ ಸಚಿವರು):

ಅ) ಹೌದು.

ಆ) ಅರ್ಕಾವತಿ ನದಿಯ ಪುನಶ್ಚೇತನದ ಯೋಜನೆಗಳನ್ನು ವಿವಿಧ ಇಲಾಖೆಗಳಾದ ಜಲಸಂಪನ್ಮೂಲ ಸಣ್ಣ ನೀರಾವರಿ, ಕಂದಾಯ, ಗಣಿ ಮತ್ತು ಭೂವಿಜ್ಞಾನ ಹಾಗೂ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಲಿಯ ಸಮನ್ವಯದೊಂದಿಗೆ ಕ್ರಮ ಕೈಗೊಳ್ಳಲಾಗುತ್ತಿದೆ. ಈಗಾಗಲೇ ನಂದಿ ಬೆಟ್ಟದಿಂದ ತಿಪ್ಪಗೊಂಡನಹಳ್ಳಿ ಜಲಾಶಯದವರೆಗೂ ಮಳೆನೀರು ಹರಿಯುವಿಕೆಗೆ ಇರುವ ಅಡಚಣೆಗಳ ಸಂಪೂರ್ಣ ಸರ್ವೆ ಕಾರ್ಯವನ್ನು ಕಾವೇರಿ ನೀರಾವರಿ ನಿಗಮದ ಮೂಲಕ ಕೈಗೊಳ್ಳಲಾಗಿದೆ. ಕಾವೇರಿ ನೀರಾವರಿ ನಿಗಮ ನಿಯಮಿತದಿಂದ ರಿಮೋಟ್ ಸೆನ್ಸಿಂಗ್ ತಂತ್ರಜ್ಞಾನವನ್ನು ಉಪಯೋಗಿಸಿ ಸೆಟಲೈಟ್ ಇಮ್ಯಾಜಿನರಿ ಅನಲೈಜ್ (Analyse) ಮಾಡಿ ಹಾಗೂ ಜಿ.ಐ.ಎಸ್. ತಂತ್ರಜ್ಞಾನದ ಮೂಲಕ

ನದೀ ಪಾತ್ರದಲ್ಲಿ ಬರುವ ಗ್ರಾಮಗಳನ್ನು ರೆವಿನ್ಯೂ ಸರ್ವೆ ಮ್ಯಾಪ್ ಮೇಲೆ ಹೊಂದಾಣಿಕೆ ಮಾಡಲಾಗಿದೆ. ಹೆಸರುಘಟ್ಟ, ಕುಮುದ್ವತಿ ಮತ್ತು ಅರ್ಕಾವತಿ ಜಲಾನಯನ ಪ್ರದೇಶವನ್ನು ನಾಲ್ಕು ವಿಭಾಗಗಳನ್ನಾಗಿ ಮಾಡಿ ತಾಂತ್ರಿಕ ವರದಿಯನ್ನು ತಯಾರಿಸಲಾಗುತ್ತಿದೆ. ಇದರಂತೆ ಮೊದಲನೆ ಹಂತವಾಗಿ ಹೆಸರುಘಟ್ಟ ಜಲಾನಯನ ಪ್ರದೇಶದಲ್ಲಿ ನಂದಿ ಬೆಟ್ಟದಿಂದ ಹೆಸರುಘಟ್ಟದವರಿಗೂ ಕಾಮಗಾರಿಯನ್ನು ಕೈಗೊಳ್ಳಲು ವಿವರವಾದ ಯೋಜನಾ ವರದಿಯನ್ನು ಕಾವೇರಿ ನೀರಾವರಿ ನಿಗಮವು ತಯಾರಿಸಿದೆ. ಅರ್ಕಾವತಿ ನದಿಯು ಕಲುಷಿತವಾಗುವುದನ್ನು ತಡೆಯಲು ಮಾಲಿನ್ಯ ನಿಯಂತ್ರಣ ಮಂಡಳಿ ಕ್ರಮ ತೆಗೆದುಕೊಳ್ಳುತ್ತಿದೆ.

ಬೆಂಗಳೂರು ಜಲಮಂಡಲಿಯು ತಿಪ್ಪಗೊಂಡನಹಳ್ಳಿ ಜಲಾಶಯದ ಬಳಿ ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದ ಸಹಯೋಗದೊಂದಿಗೆ ಸಿಸ್ಮೋಮೀಟರ್‌ನ್ನು ಅಳವಡಿಸಲಾಗಿದೆ. ಇದರಿಂದ ಜಲಾಶಯದ ಸುತ್ತಮುತ್ತಲ ಪ್ರದೇಶದಲ್ಲಿ ನಡೆಯುವ ಗಣಿಗಾರಿಕೆಯನ್ನು ಪರಿಶೀಲಿಸಲು ಹಾಗೂ ಇದನ್ನು ನಿಯಂತ್ರಿಸಲು ಸಹಾಯಕವಾಗಿದ್ದು, ಕಾಲಕಾಲಕ್ಕೆ ಇದರ ವರದಿಯನ್ನು ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಗಮನಕ್ಕೆ ತರಲಾಗುತ್ತಿದೆ ಹಾಗೂ ಜಲಮಂಡಳಿಯು ನೀರಿನ ಗುಣಮಟ್ಟವನ್ನು ಪರಿಶೀಲಿಸಲು ಜಲಮಾದರಿಗಳನ್ನು ಆಗಾಗ್ಗೆ ಪರೀಕ್ಷಿಸುತ್ತಿದೆ.

ಆ) ಹೌದು.

ಇ) ಈ ಪ್ರಶ್ನೆಗೆ 'ಆ'ದಲ್ಲಿ ತಿಳಿಸಿದಂತೆ ಕ್ರಮ ತೆಗೆದುಕೊಳ್ಳಲಾಗುತ್ತಿದೆ.

ಈ) ಇಲ್ಲ.

ವಾಜಪೇಯಿ ಆಶ್ರಯ ಯೋಜನೆ ಕುರಿತು

142 (394) ಶ್ರೀ ಸಿದ್ದು ಸವದಿ (ತೇರದಾಳ): ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ವಾಜಪೇಯಿ ಆಶ್ರಯ ಯೋಜನೆ ಅಡಿಯಲ್ಲಿ ರಾಜ್ಯದಲ್ಲಿ ಯಾವ ಯಾವ ನಗರಗಳಲ್ಲಿ ಮನೆ ಕಟ್ಟಡಗಳ ಕೆಲಸವನ್ನು ಪ್ರಾರಂಭಿಸಲಾಗಿದೆ;

ಆ) ತೇರದಾಳ ಮತಕ್ಷೇತ್ರದ ತೇರದಾಳ, ರಬಕವಿ ಬನಹಟ್ಟಿ ಮತ್ತು ಮಹಾಲಿಂಗಪುರ ನಗರಗಳ ಫಲಾನುಭವಿಗಳ ಪಟ್ಟಿ ಮಾಡಿ ಸರ್ಕಾರಕ್ಕೆ ಕಳುಹಿಸಿದ್ದರೂ ಸಹ ಮನೆ ಕಟ್ಟಡಗಳನ್ನು ಪ್ರಾರಂಭಿಸದಿಲ್ಲದಿರುವುದಕ್ಕೆ ಕಾರಣವೇನು; ಯಾವಾಗ ಪ್ರಾರಂಭಿಸಲಾಗುವುದು;